ವಿವರವಾದ ಯೋಜನಾ ವರದಿಯನ್ನು ತಯಾರಿಸಲು ತಾಂತ್ರಿಕ ಸಮಾಲೋಚಕರನ್ನು ನೇಮಿಸಲು ಟೆಂಡರನ್ನು ಆಹ್ವಾನಿಸಲಾಗಿರುತ್ತದೆ.

2008–09ನೇ ಸಾಲಿನಲ್ಲಿ ಸದರಿ ರಸ್ತೆಯನ್ನು ರೂ.7.00 ಲಕ್ಷಗಳ ಅನುದಾನದಲ್ಲಿ ನಿರ್ವಹಣೆ ಮಾಡಿ ವಾಹನ ಸಂಚಾರಕ್ಕೆ ಯೋಗ್ಯವಿಡಲಾಗಿದೆ. 2009–10ನೇ ಸಾಲಿನ ಪೂರ್ವ ಮುಂಗಾರು ದುರಸ್ತಿ ಕಾಮಗಾರಿಗಳು ಸಹ ಪ್ರಗತಿಯಲ್ಲಿವೆ.

971 Sri Kimmane Rathnakar : Hon'ble Minister for Public Works kindly answer to the below question?

a) Whether Government intends to develop Agumbe Ghat to enable movement of heavy traffic vehicles;

b) Presently Agumbe Ghat being connecting road for Udupi and Shimoga districts, having been badly damaged whether the Government intends to take up repair works?

Sri C.M.UDASI (Minister for Public Works) :

a) and b) This road has several sharp curves, has protected forest area on both sides of the road, as such it is not possible to acquire land in this forest area for widening of road.

Tenders gave been invited for appointment of technical consultants for preparation detailed project report for development by widening the entire Agumbe Ghat road in Shimoga and Udupi districts.

The road has been kept traffic worthy by undertaking maintenance with funds of Rs.7.00 lakhs during 2008-09. Pre-monsoon repair works for the year 2009-10 are also in progress.

454 ಶ್ರೀ ಕುಮಾರಸ್ವಾಮಿ ಕೆ.ಜಿ. : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಹೊಳೆಹೊನ್ನೂರು–ಹೊಳಲೂರು ಹೋಬಳಿಗಳನ್ನು ನೇರವಾಗಿ ಸಂಪರ್ಕಿಸುವ ತುಂಗಭದ್ರಾ ಸೇತುವೆಗೆ ಸರ್ಕಾರ 20 ಕೋಟಿ ಬಡ್ಜೆಟ್ ಅನುದಾನ ಒದಗಿಸಲಾಗಿದ್ದರೂ ಕಾಮಗಾರಿ ಆರಂಭಿಸಲು ವಿಳಂಬಕ್ಕೆ ಕಾರಣವೇನು;

ಆ) ಆ ಸೇತುವೆಯನ್ನು ಸಂಪರ್ಕಿಸುವ ರಸ್ತೆಯನ್ನು ಉನ್ನತೀಕರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಕ-111

ಇ) ಹಾಗಿದ್ದಲ್ಲಿ, ಈ ಸಂಪರ್ಕ ರಸ್ತೆಯನ್ನು ಯಾವಾಗ ಉನ್ನತೀಕರಿಸಲಾಗುವುದು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) 2009–10ನೇ ಸಾಲಿನಲ್ಲಿ ಶಿವಮೊಗ್ಗ ತಾಲ್ಲೂಕು, ಹೊಳಲೂರು ಬಳಿ ತುಂಗಭದ್ರಾ ನದಿಗೆ ರೂ. 2745.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಕಾಮಗಾರಿಯನ್ನು ಅನುದಾನದ ಲಭ್ಯತೆ ಮೇರೆಗೆ ತೆಗೆದುಕೊಳ್ಳುವ ಬಗ್ಗೆ ಪರಿಶೀಲನೆಯಲ್ಲಿದೆ.

ಆ) ಸದರಿ ಗ್ರಾಮೀಣ ಸಂಪರ್ಕ ರಸ್ತೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ.

872 ಶ್ರೀ ಲಾಲಾಜಿ ಆರ್.ಮೆಂಡನ್ (ಕಾಪು) : ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೀನುಗಾರಿಕಾ ಇಲಾಖೆಯಿಂದ ಮೀನುಗಾರರ ಮಹಿಳೆಯವರಿಗೆ ವ್ಯಾಪಾರಕ್ಕಾಗಿ ಮಾರುಕಟ್ಟೆ ಹಾಗೂ ಮೂಲಭೂತ ಸೌಲಭ್ಯಕ್ಕಾಗಿ ಎಷ್ಟು ಹೊಸ ಮಾರುಕಟ್ಟೆ ನಿರ್ಮಾಣದ ಯೋಜನೆ ರೂಪಿಸಲಾಗಿದೆ;

ಆ) ಕಾಪು ಕ್ಷೇತ್ರದಲ್ಲಿ ಎಷ್ಟು ಕಡೆ ಇಂತಹ ಸೌಲಭ್ಯ ಒದಗಿಸಲಾಗುವುದು;

ಇ) ಮೀನುಗಾರರ ಮಹಿಳೆಯರಿಗೆ ವಾಹನದಲ್ಲಿ ಚಲಿಸುವಾಗ ಕಡ್ಡಾಯ ಜೀವ ವಿಮಾ ಸೌಲಭ್ಯ ಒದಗಿಸಲಾಗುವುದೇ?

ಶ್ರೀ ಆನಂದ ವಸಂತ ಅಸ್ನೋಟಿಕರ (ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) :

ಅ) 2009–10ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ರೂ.2.64 ಲಕ್ಷ ಅನುದಾನ ಒದಗಿಸಲಾಗಿದ್ದು, 8 ಮಾರುಕಟ್ಟೆಗಳ ನಿರ್ಮಾಣ / ನವೀಕರಣ ಕೈಗೊಳ್ಳುವ ಗುರಿಯನ್ನು ಹೊಂದಲಾಗಿದೆ.

ಆ) ಪ್ರಸ್ತುತ ಸಾಲಿನಲ್ಲಿ ಮೀನು ಮಾರುಕಟ್ಟೆ ನಿರ್ಮಾಣ ಯೋಜನೆಯಡಿ ಉಡುಪಿ ಜಿಲ್ಲೆಗೆ ಯಾವುದೇ ಅನುದಾನ ಒದಗಿಸಿರುವುದಿಲ್ಲವಾದ್ದರಿಂದ ಕಾಪು ಕ್ಷೇತ್ರದಲ್ಲಿ ಈ ಯೋಜನೆಯಡಿ ಮೀನುಗಾರಿಕೆ ಇಲಾಖೆಯಿಂದ ಯಾವುದೇ ಮೀನು ಮಾರುಕಟ್ಟೆಗಳ ನಿರ್ಮಾಣ/ ನವೀಕರಣ ಪ್ರಸ್ತಾಪಿಸಿರುವುದಿಲ್ಲ.